**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು :- ಶ್ರೀ ಜಿ ಆರ್ ವಕೀಲರಿಂದ 1 ನೇ ಎದುರುದಾರರ ಪರವಾಗಿ**

9. ನನ್ನ ಮಗ ಅಭಿಷೇಕ್ ನಾಯ್ಕ ಜನ್ಮ ದಿನಾಂಕ ಗೊತ್ತಿಲ್ಲ. ಈಗ ಆತ ಮನೆಯಲ್ಲಿ ಇರುವುತ್ತಾನೆ. ಆತ ಎಸ್.ಎಸ್.ಎಲ್.ಸಿ. ವಿದ್ಯಾಭ್ಯಾಸ ಮಾಡಿರುತ್ತಾನೆ. ಆತನ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಹಾಜರು ಪಡಿಸಲು ತೊಂದರೆ ಇರುವುದಿಲ್ಲ. 1 ನೇ ಎದುರುದಾರ ನಮ್ಮ ಊರಿನವರು ಇರುತ್ತಾರೆ. 1 ನೇ ಎದುರುದಾರ ಹಾಗೂ ದೂರುದಾರ ಚಂದ್ರ ಶೇಖರ್ ಅಣ್ಣ ತಮ್ಮಂದಿರು ಇರುತ್ತಾರೆ ಎಂದರೆ ಸರಿ . ನ್ಯಾಯಾಲಯಕ್ಕೆ ಹಾಜರು ಪಡಿಸಿರುವ ದಾಖಲೆಗಳ ಬಗ್ಗೆ ಮಾಹಿತಿ ಇರುತ್ತದೆ. ಬೈಕ್ ಚಾಲಕನ ವಿರುದ್ದ ಪೋಲೀಸರು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಾರೆ. ಕೆಎ-16-ಕೆ-3647 ವಾಹನದ ಚಾಲಕನಾದ 3 ನೇ ಎದುರುದಾರನ ಮೇಲೆ ಪೋಲಿಸರು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಸದರಿ ವಾಹನದ ಮಾಲೀಕ 4 ನೇ ಎದುರುದಾರ ಇರುತ್ತಾನೇ ಎಂದರೆ ಇರಬಹುದು. ಸದರಿ ವಾಹನಕ್ಕೆ ಅಪಘಾತವಾದ ದಿನ ವಿಮೆ ಇರಲಿಲ್ಲ ಎಂದು ದೋಷಾರೋಪಣಾ ಪಟ್ಟಿ ಸಲ್ಲಿಸಲಾಗಿದೆ ಎಂದರೆ ಸರಿಯಲ್ಲ. ಪೋಲಿಸರು 3 ನೇ ಎದುರುದಾರಂ ತಪ್ಪಿನಿಂದ ಅಪಘಾತವಾಗಿದೆ ಎಂದು ದೋಷಾರೋಪಣಾ ಪಟ್ಟಿ ಸಲ್ಲಿಸಿದರು 1 ನೇ ಎದುರುದಾರನ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ಸುಳ್ಳುಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆದ್ದುರಿಂದ 1 ನೇ ಎದುರುದಾರ ಪರಿಹಾರ ನೀಡಲು ಭಾದ್ಯಸ್ಥ ನಿರುವುದಿಲ್ಲ ಎಂದರೆ ಸರಿಯಲ್ಲ.

10. ನಾನು ಅಪಘಾತವನ್ನು ಖುದ್ದಾಗಿ ನೋಡಿರುವುದಿಲ್ಲ. ಚಂದ್ರ ಶೇಖರ್ ರವರು 3 ನೇ ಎದುರುದಾರ ತನ್ನ ತಪ್ಪಿನಿಂದ ಅಪಘಾತ ಮಾಡಿರುತ್ತಾನೆ ಎಂದು ದೂರು ನೀಡಿರುತ್ತಾರೆ ಎಂದರೆ ಸರಿ. ಚಂದ್ರ ಶೇಖರ್ ರವರು ಈ ಅಪಘಾತ ಪಡಿಸಿರುವುದಿಲ್ಲ ಹಾಗೂ ಅವರ ತಪ್ಪು ಇರುವುದಿಲ್ಲ ಎಂದರೆ ಗೊತ್ತಿಲ್ಲ.

11. ನನ್ನ ಮಗನ ಚಿಕಿತ್ಸೆಗೆ ಮೂರು ಲಕ್ಷ ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗನಿಗೆ ಭಾರ ಎತ್ತಲು ಆಗುವುದಿಲ್ಲ ಹಾಗು ನಡೆಯಲು ಮತ್ತು ಕುಳಿತುಕೊಳ್ಳಲು ಅಗುವುದಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗ 15 ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆತ ದಾವಣಗೆರೆ ಚಿಗಟೇರಿ ಆಸ್ಪತ್ರೆಯಲ್ಲಿ ಚಿಕಿತ್ಸೆ

ಪಡೆದಿರುತ್ತಾನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗನಿಗೆ ಯಾವುದೇ ಅಂಗನ್ಯೂನ್ಯತೆ ಇರುವುದಿಲ್ಲ ಎಂದಸರೆ ಸರಿಯಲ್ಲ. ಆತನ ಅಪ್ರಪ್ತಾ ವಯಸ್ಕನಾದ ಕಾರಣ ಕುಟುಂಬ ನಿರ್ವಹಣೆ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಆತನ ದುಡಿಮೆಯ ಬಗ್ಗೆ ಯಾವುದೇ ದಾಖಲೆ ಹಾಜರು ಪಡಿಸಿರುವುದಿಲ್ಲ. ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ. ಇದೆ.

2 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಎ.ಎಂ.ಎ.ಸಿ.ಟಿ, ಚಿತ್ರದುರ್ಗ